# ಕರ್ನಾಟಕ ವಿಧಾನ ಪರಿಷತ್

| | |
|---|---|
| ಮಾನ್ಯ ಸದಸ್ಯರ ಹೆಸರು | ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮ ನಿರ್ದೇಶಿತರ ಕ್ಷೇತ್ರ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1226 |
| ಉತ್ತರಿಸಬೇಕಾದ ದಿನಾಂಕ | 17.12.2025 |
| ಉತ್ತರಿಸಬೇಕಾದ ಸಚಿವರು | ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಉತ್ತರ ಕನ್ನಡ ಜಿಲ್ಲೆಯಲ್ಲಿರುವ ವಸತಿ ರಹಿತ ಕುಟುಂಬಗಳ ಸಂಖ್ಯೆ ಎಷ್ಟು; ವಸತಿ ರಹಿತ ಕುಟುಂಬಗಳನ್ನು ಗುರುತಿಸಲು ಸರ್ಕಾರವು ನಿಗದಿಪಡಿಸಿರುವ ಮಾನದಂಡಗಳು ಯಾವುವು; ವಸತಿ ರಹಿತರನ್ನು ಗುರುತಿಸಿ ಅವರಿಗೆ ಆಶ್ರಯ ಕಲ್ಪಿಸಿ ರಾಜ್ಯವನ್ನು ಗುಡಿಸಲು ಮುಕ್ತ ರಾಜ್ಯವನ್ನಾಗಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು: | (ಉತ್ತರ ಕೆಳಗಿನಂತಿದೆ) |

ಉತ್ತರ ಕನ್ನಡ ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿ ಒಟ್ಟು 52,902 ಹಾಗೂ ನಗರ ಪ್ರದೇಶದಲ್ಲಿ 12,721 ವಸತಿ/ನಿವೇಶನರಹಿತ ಕುಟುಂಬಗಳಿರುವುದು ಕಂಡುಬಂದಿರುತ್ತದೆ ವಿವರ ಈ ಕೆಳಕಂಡಂತಿದೆ.

| ಪ್ರದೇಶ | ವಸತಿ ರಹಿತರು | ನಿವೇಶನ ರಹಿತರು | ಒಟ್ಟು |
|---|---|---|---|
| ಗ್ರಾಮೀಣ | 26479 | 26423 | 52902 |
| ನಗರ | 4610 | 8111 | 12721 |
| **ಒಟ್ಟು** | **31089** | **34534** | **65623** |

**ಗ್ರಾಮೀಣ ಪ್ರದೇಶದಲ್ಲಿ ವಸತಿ ರಹಿತ ಕುಟುಂಬಗಳನ್ನು ಗುರುತಿಸಲು ಸರ್ಕಾರವು ನಿಗದಿಪಡಿಸಿರುವ ಮಾನದಂಡಗಳು ಈ ಕೆಳಗಿನಂತಿವೆ:**

- ಅರ್ಜಿದಾರರು ಕಡ್ಡಾಯವಾಗಿ ಮಹಿಳೆಯಾಗಿರಬೇಕು (ವಿವಾಹಿತ ಅಥವಾ ಏಕ ಮಹಿಳಾ ಒಡೆತನದ ಗೃಹಿಣಿ). ಮಾಜಿ ಯೋಧರು, ವಿಧುರರು, ಅಂಗವಿಕಲರು ಮತ್ತು ಹಿರಿಯ ನಾಗರೀಕರಾಗಿದ್ದಲ್ಲಿ ಪುರುಷರು ಸಹಾ ಅರ್ಹರಾಗಿರುತ್ತಾರೆ.
- ಅರ್ಜಿದಾರರ ಕುಟುಂಬವು ಆರ್ಥಿಕವಾಗಿ ಮತ್ತು ಸಾಮಾಜಿಕವಾಗಿ ಹಿಂದುಳಿದಿದ್ದು, ವಾರ್ಷಿಕ ಆದಾಯವು, ಗ್ರಾಮೀಣ ಪ್ರದೇಶದವರಾಗಿದ್ದಲ್ಲಿ ರೂ.1,20,000/- ಕ್ಕಿಂತ ಕಡಿಮೆ ಇರಬೇಕು ನಗರ ಪ್ರದೇಶದಲ್ಲಿ ರೂ.2,00,000/-ರ ಒಳಗಿರಬೇಕು.
- ಅರ್ಜಿದಾರರ ಕುಟುಂಬವು ವಸತಿ ರಹಿತರಾಗಿದ್ದು, ಅರ್ಜಿದಾರರು ಅಥವಾ ಕುಟುಂಬದ ಯಾವುದೇ ಸದಸ್ಯರ ಹೆಸರಿನಲ್ಲಿ ಕರ್ನಾಟಕದ ಯಾವುದೇ ಭಾಗದಲ್ಲಿ ಸ್ವಂತ ಮನೆಯನ್ನು ಹೊಂದಿರಬಾರದು. ಶಿಥಿಲಗೊಂಡ ಮನೆ ಅಥವಾ ಗುಡಿಸಲಿನಲ್ಲಿ ವಾಸಿಸುತ್ತಿರುವವರು ಅರ್ಹರಾಗಿರುತ್ತಾರೆ.
- ಅರ್ಜಿದಾರರು ಸ್ವಂತ ನಿವೇಶನ ಹೊಂದಿದ್ದು, ನಿವೇಶನಕ್ಕೆ ಸಂಬಂಧಿಸಿದಂತೆ ಖಾತೆ ಹೊಂದಿರಬೇಕು (ಪಾರಂಪರಿಕ ಅರಣ್ಯ ಹಕ್ಕುಗಳ ಕಾಯ್ದೆಯನ್ವಯ ಜಿಲ್ಲಾ ಸಮಿತಿಯಿಂದ ನೀಡಲಾದ ಹಕ್ಕುಪತ್ರ ಪಡೆದಿದ್ದಲ್ಲಿ ವಸತಿ ಸೌಕರ್ಯ ಪಡೆಯಲು ಪರಿಗಣಿಸಬಹುದಾಗಿದೆ.)
- ಬೇರೆ ಯಾವುದೇ ಯೋಜನೆ/ಇಲಾಖೆಯಿಂದ ಈಗಾಗಲೇ ವಸತಿ ಸೌಲಭ್ಯ ಪಡೆದಿರಬಾರದು.
- ಪ್ರಧಾನ ಮಂತ್ರಿ ಆವಾಸ್ ಯೋಜನೆ(ಗ್ರಾ)ಯಡಿ ವಸತಿ ಸೌಲಭ್ಯ ಪಡೆಯಲು ಕೇಂದ್ರ ಸರ್ಕಾರದ Awaas Plus PWL ಪಟ್ಟಿಯಲ್ಲಿ ಹೆಸರು ಸೇರಿರಬೇಕು.
- ಡಾ||ಬಿ.ಆರ್.ಅಂಬೇಡ್ಕರ್ ಆವಾಸ್ ಯೋಜನೆಯಡಿ ವಸತಿ ಸೌಲಭ್ಯ ಪಡೆಯಲು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟವರ್ಗಕ್ಕೆ ಸೇರಿದವರಾಗಿರಬೇಕು.

**ಪ್ರಧಾನ ಮಂತ್ರಿ ಆವಾಸ್ ಯೋಜನೆ (ನಗರ) ದಡಿ ನಗರ ಪ್ರದೇಶದಲ್ಲಿ ವಸತಿರಹಿತ ಕುಟುಂಬಗಳನ್ನು ಗುರುತಿಸಲು ಮಾನದಂಡಗಳು ಈ ಕೆಳಗಿನಂತಿವೆ.**

- ದೇಶದಾದ್ಯಂತ ಅವನ / ಅವಳ ಹೆಸರಿನಲ್ಲಿ ಯಾವುದೇ ಮನೆ ಇರಬಾರದು.
- ವಾರ್ಷಿಕ ಆದಾಯ 3 ಲಕ್ಷಕ್ಕಿಂತ ಕಡಿಮೆ ಇರಬೇಕು.

- ಇತರೇ ವಸತಿ ಯೋಜನೆಗಳಲ್ಲಿ ಈಗಾಗಲೇ ಸಹಾಯಧನ ಪಡೆದಿರಬಾರದು.

**ವಸತಿರಹಿತರನ್ನು ಗುರುತಿಸಿ ಅವರಿಗೆ ಆಶ್ರಯ ಕಲ್ಪಿಸಿ ರಾಜ್ಯವನ್ನು ಗುಡಿಸಲು ಮುಕ್ತವಾಗಿಸಲು ಸರ್ಕಾರವು ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದೆ.**

**ಕೇಂದ್ರ ಪುರಸ್ಕೃತ ವಸತಿ ಯೋಜನೆಗಳು:**

1. ಪ್ರಧಾನ ಮಂತ್ರಿ ಆವಾಸ್ ಯೋಜನೆ (ಗ್ರಾಮೀಣ)
2. ಪ್ರಧಾನ ಮಂತ್ರಿ ಆವಾಸ್ ಯೋಜನೆ (ನಗರ)
3. ಪಿಎಮ್-ಜನಮನ್

**ರಾಜ್ಯ ಪುರಸ್ಕೃತ ವಸತಿ ಯೋಜನೆಗಳು:**

1. ಬಸವ ವಸತಿ ಯೋಜನೆ
2. ಡಾ. ಬಿ.ಆರ್. ಅಂಬೇಡ್ಕರ್ ವಸತಿ ಯೋಜನೆ (ಗ್ರಾಮೀಣ & ನಗರ)
3. ದೇವರಾಜು ಅರಸು ವಸತಿ ಯೋಜನೆ (ಗ್ರಾಮೀಣ & ನಗರ)
4. ವಾಜಪೇಯಿ ನಗರ ವಸತಿ ಯೋಜನೆ
5. ಮುಖ್ಯಮಂತ್ರಿಗಳ ಬಹುಮಹಡಿ ಬೆಂಗಳೂರು ವಸತಿ ಯೋಜನೆ (ಬೆಂಗಳೂರು ನಗರದಲ್ಲಿ ಮಾತ್ರ)
6. ಮುಖ್ಯಮಂತ್ರಿಗಳ ಗ್ರಾಮೀಣ ಮತ್ತು ನಗರ ನಿವೇಶನ ಯೋಜನೆ

ವಸತಿ ರಹಿತರಿಗೆ ಮೇಲ್ಕಂಡ ರಾಜ್ಯ ಹಾಗೂ ಕೇಂದ್ರ ಸರ್ಕಾರದ ವಸತಿ ಯೋಜನೆಗಳಡಿಯಲ್ಲಿ ಆಯವ್ಯಯದಲ್ಲಿ ನೀಡಲಾಗುವ ಹೊಸ ಮನೆಗಳ ಗುರಿಗೆ ಅನುಗುಣವಾಗಿ ಹಂತ ಹಂತವಾಗಿ ವಸತಿ ಸೌಕರ್ಯವನ್ನು ಕಲ್ಪಿಸಲು ಕ್ರಮವಹಿಸಲಾಗುತ್ತಿದೆ.

ಆ) ಉತ್ತರ ಕನ್ನಡ ಜಿಲ್ಲೆಯಲ್ಲಿರುವ ವಸತಿ ರಹಿತ ಬಡ ಜನರಿಗೆ ವಸತಿ ಸೌಲಭ್ಯ ಕಲ್ಪಿಸಲು ಕಳೆದ 2 ವರ್ಷದಲ್ಲಿ ಎಷ್ಟು ಮನೆಗಳನ್ನು ಹಂಚಲಾಗಿದೆ ಮತ್ತು ಜಿಲ್ಲೆಗೆ ಎಷ್ಟು ಮನೆಗಳ ಅನುಷ್ಠಾನದ ಗುರಿಯನ್ನು ನಿಗಧಿಪಡಿಸಲಾಗಿದೆ: (ಮಾಹಿತಿ ನೀಡುವುದು)

ಉತ್ತರ ಕನ್ನಡ ಜಿಲ್ಲೆಯಲ್ಲಿ ವಸತಿ ರಹಿತ ಬಡಜನರಿಗೆ ವಸತಿ ಸೌಲಭ್ಯ ಕಲ್ಪಿಸಲು 2023-24ನೇ ಸಾಲಿನಿಂದ 2024-25ನೇ ಸಾಲಿನಲ್ಲಿ ವಿವಿಧ ವಸತಿ ಯೋಜನೆಗಳಡಿಯಲ್ಲಿ ಒಟ್ಟಾರೆಯಾಗಿ 4,040 ಮನೆಗಳನ್ನು ಮಂಜೂರು ಮಾಡಲಾಗಿದೆ. ವಿವರ ಇಂತಿದೆ:

| ಯೋಜನೆ | ಮಂಜೂರು | ಪೂರ್ಣ | ಪ್ರಗತಿಯ ಲ್ಲಿರುವ |
|---|---|---|---|
| **ಕೇಂದ್ರ ಪುರಸ್ಕೃತ ವಸತಿ ಯೋಜನೆಗಳು:** | | | |
| ಪ್ರಧಾನಮಂತ್ರಿ ಆವಾಸ್ -(ಗ್ರಾಮೀಣ) | 3775 | 58 | |
| **ರಾಜ್ಯ ಪುರಸ್ಕೃತ ವಸತಿ ಯೋಜನೆಗಳು:** | | | |
| ದೇವರಾಜ ಅರಸು ವಸತಿ (ಗ್ರಾಮೀಣ) | 224 | 3 | |
| ದೇವರಾಜ ಅರಸು ವಸತಿ (ನಗರ) | 41 | 0 | |
| **ಕೇಂದ್ರ ಮತ್ತು ರಾಜ್ಯ ಸರ್ಕಾರದ ವಸತಿ ಯೋಜನೆಗಳು** | **4040** | **61** | |

ಇ) ಉತ್ತರ ಕನ್ನಡ ಜಿಲ್ಲೆಯಲ್ಲಿರುವ ವಸತಿ ರಹಿತ ಮತ್ತು ನಿವೇಶನ ರಹಿತ ಒಟ್ಟು ಎಷ್ಟು ಬುಡಕಟ್ಟು ಜನಾಂಗದ ಕುಟುಂಬಗಳಿವೆ; ಕಳೆದ 2 ವರ್ಷಗಳಲ್ಲಿ ಎಷ್ಟು ಬುಡಕಟ್ಟು ಕುಟುಂಬಗಳಿಗೆ ಮನೆಗಳನ್ನು ಹಂಚಲಾಗಿದೆ; ಜಿಲ್ಲೆಯಲ್ಲಿ ಬಾಕಿ ಇರುವ ವಸತಿ ರಹಿತ ಕುಟುಂಬಗಳಿಗೆ ಆದ್ಯತೆಯ ಮೇರೆಗೆ ಆಶ್ರಯ ಕಲ್ಪಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ವಿವರ ನೀಡುವುದು)

2011 ರ ಸರ್ವೆಯಂತೆ ಉತ್ತರ ಕನ್ನಡ ಜಿಲ್ಲೆಯಲ್ಲಿ ಇದುವರೆಗೂ 10,477 ಬುಡಕಟ್ಟು ಜನಾಂಗದ ಕುಟುಂಬಗಳಿವೆ.
2023-24 ರಿಂದ ಇಲ್ಲಿಯವರೆಗೆ ಉತ್ತರ ಕನ್ನಡ ಜಿಲ್ಲೆಯ ಸರ್ಕಾರದ ವಿವಿಧ ವಸತಿ ಯೋಜನೆಗಳಡಿ ಪರಿಶಿಷ್ಟ ಪಂಗಡದ ಬುಡಕಟ್ಟು ಜನಾಂಗ ಒಳಪಟ್ಟಂತೆ ಒಟ್ಟು 135 ಮನೆಗಳನ್ನು ಮಂಜೂರು ಮಾಡಲಾಗಿದೆ. ಯೋಜನಾವಾರು ವಿವರ ಈ ಕೆಳಕಂಡಂತಿದೆ.

| ಯೋಜನೆ | ಮಂಜೂರಾದ ಮನೆಗಳು |
|---|---|
| ಪ್ರಧಾನ ಮಂತ್ರಿ ಆವಾಸ್ ಯೋಜನೆ (ಗ್ರಾಮೀಣ) | 129 |
| ದೇವರಾಜ ಅರಸು ವಸತಿ ಯೋಜನೆ(ಪ್ರವಾಹ ಪೀಡಿತ) ಗ್ರಾಮೀಣ | 6 |
| **ಒಟ್ಟು** | **135** |

ವಸತಿರಹಿತರಿಗೆ ಮೇಲ್ಕಂಡ ರಾಜ್ಯ ಹಾಗೂ ಕೇಂದ್ರ ಸರ್ಕಾರದ ವಸತಿ ಯೋಜನೆಗಳಡಿಯಲ್ಲಿ ಮುಂದಿನ ದಿನಗಳಲ್ಲಿ ಆಯವ್ಯಯದಲ್ಲಿ ನೀಡಲಾಗುವ ಹೊಸ ಮನೆಗಳ ಗುರಿಗೆ ಅನುಗುಣವಾಗಿ ಮನೆಗಳ ಗುರಿಯನ್ನು ನಿಗದಿಪಡಿಸಿ ಹಂತ ಹಂತವಾಗಿ ವಸತಿ ಸೌಕರ್ಯವನ್ನು ಕಲ್ಪಿಸಲು ಕ್ರಮವಹಿಸಲಾಗುತ್ತಿದೆ.

ಸಂಖ್ಯೆ: ವಇ 529 ಹೆಚ್‌ಎಎಂ 2025

**(ಬಿ.ಜೆಡ್. ಜಮೀರ್ ಅಹ್ಮದ್‌ಖಾನ್)**
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು